**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಿ ಎಸ್ ಅರುಣ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) ಇವರು ಶೂನ್ಯ ವೇಳೆಯಲ್ಲಿ "ಸ್ಮಾರಕಗಳ ರಕ್ಷಣೆ ಮತ್ತು ಒತ್ತುವರಿ ತೆರವುಗೊಳಿಸುವ ಕುರಿತು" ಪ್ರಸ್ತಾಪಿಸಿರುವ ಬಗ್ಗೆ.**

**ಪ್ರಶ್ನೆ:**

ಹೊಸನಗರ ತಾಲ್ಲೂಕಿನ ನಗರ ಹೋಬಳಿಯ ಬಿದನೂರಿನ ಕೊಪ್ಪಲಮಠದಲ್ಲಿರುವ ಕೆಳದಿ ಅರಸರ ಐತಿಹಾಸಿಕ ಸ್ಮಾರಕಗಳು ಒತ್ತುವರಿಯಾಗಿದ್ದು, ಅವನ್ನು ಸಂರಕ್ಷಿಸುವಂತೆ ದಿನಾಂಕ:03.12.2023ರ ಪತ್ರಿಕೆಯಲ್ಲಿ ವರದಿಯಾಗಿರುತ್ತದೆ.

ನಾಡಿಗೆ ಆದರ್ಶಮಯ ಆಡಳಿತ ನೀಡಿದ ಕೆಳದಿ ಅರಸರ ಸಮಾಧಿಗಳು ನಶಿಸುವ ಸ್ಥಿತಿಗೆ ತಲುಪಿದ್ದು, ಅರಸರ ಆಳ್ವಿಕೆಯ ಕಾಲದಲ್ಲಿ ಬಿದನೂರಿನ ಕೊಪ್ಪಲಮಠದಲ್ಲಿ ಸಮಾಧಿಗಳನ್ನು ರಚಿಸಿ, ಸ್ಮಾರಕಗಳನ್ನು ನಿರ್ಮಿಸಲಾಗಿದೆ. ಈ ಸ್ಮಾರಕಗಳನ್ನು ಮುಂದಿನ ಪೀಳಿಗೆಗೆ ಉಳಿಸಿಕೊಂಡು ಹೋಗುವ ನಿಟ್ಟಿನಲ್ಲಿ ಇದರ ರಕ್ಷಣೆ ಮುಖ್ಯವಾದುದಾಗಿರುತ್ತದೆ. ಸ್ಮಾರಕಕ್ಕೆ ಹೋಗುವ ದಾರಿಯನ್ನು ಅತಿಕ್ರಮಿಸಲಾಗಿದ್ದು, ಶಿವಪ್ಪನಾಯಕ ಮತ್ತು ಕೆಳದಿ ರಾಣಿ ಚೆನ್ನಮ್ಮಾಜಿ ಸಮಾಧಿ ಪೂರ್ಣ ನಶಿಸಿ ಹೋಗುತ್ತಿದೆ. ಇದರ ಜೊತೆಗೆ ತಾಲ್ಲೂಕಿನ ಹುಂಚ ಹೋಬಳಿ ಮೇಲಿನ ಬೆಸಿಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೋಮಾಳ ಜಾಗದಲ್ಲಿ ಸಹ ಅಕ್ರಮ ಒತ್ತುವರಿ ಆಗಿದೆ.

ಆದ ಕಾರಣ, ಈ ಸ್ಮಾರಕಗಳ ರಕ್ಷಣೆ ಮತ್ತು ಒತ್ತುವರಿ ತೆರವುಗೊಳಿಸುವ ಸಂಬಂಧ ಕಂದಾಯ ಇಲಾಖೆ ಮತ್ತು ಪ್ರಾಚ್ಯವಸ್ತು ಇಲಾಖೆಗಳ ಜೊತೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು, ಒತ್ತಾಯಿಸುತ್ತೇನೆ.

**ಉತ್ತರ:**

ಹೊಸನಗರ ತಾಲ್ಲೂಕಿನ ನಗರ ಹೋಬಳಿಯ ಬಿದನೂರಿನ ಕೊಪ್ಪಲಮಠದಲ್ಲಿರುವ ಕೆಳದಿ ಅರಸರ ಐತಿಹಾಸಿಕ ಸ್ಮಾರಕಗಳು ಒತ್ತುವರಿಯಾಗಿರುವ ಬಗ್ಗೆ ದಿನಾಂಕ:03.12.2023ರ ಪತ್ರಿಕೆಯಲ್ಲಿ ವರದಿಯಾಗಿರುವ ಮಾಹಿತಿಯನ್ನು ಪರಿಶೀಲಿಸಿ ನಿಯಮಾನುಸಾರ ಕ್ರಮವಹಿಸಲಾಗುವುದು.

ಬಿದನೂರಿನ ಕೊಪ್ಪಲಮಠದಲ್ಲಿರುವ ಶಿವಪ್ಪನಾಯಕರ ವಂಶಸ್ಥರ ಸಮಾಧಿಗಳು ರಾಜ್ಯ ಸಂರಕ್ಷಿತ ಸ್ಮಾರಕಗಳಾಗಿದ್ದು, ಈ ಸಮಾಧಿಗಳ ಸಂರಕ್ಷಣೆಯನ್ನು ಕೈಗೊಂಡು ಈ ಜಾಗಕ್ಕೆ ತಂತಿಬೇಲಿಯನ್ನು ಅಳವಡಿಸಿ, ರಕ್ಷಣೆಯನ್ನು ಕೈಗೊಳ್ಳಲಾಗಿರುತ್ತದೆ. ಸರ್ವೇ ನಂ.66 ರಲ್ಲಿ ಖಾಸಗೀ ಜಮೀನಿನಲ್ಲಿರುವ ಶಿವಪ್ಪನಾಯಕನ ಸಮಾಧಿ ಮತ್ತು ಸರ್ವೇ ನಂ.74ರಲ್ಲಿರುವ ಕೆಳದಿ ರಾಣಿ ಚೆನ್ನಮ್ಮಾಜಿ ಸಮಾಧಿ ಅರಣ್ಯ ಇಲಾಖೆಯ ವ್ಯಾಪ್ತಿಯಲ್ಲಿದ್ದು (ಮುಪತ್ತು ಅರಣ್ಯ) ಈ ಸಮಾಧಿಗಳು ಕೆಳದಿಯ ವಾಸ್ತುಶೈಲಿಯಲ್ಲಿದ್ದು, ಈ ಎರಡೂ ಸಮಾಧಿಗಳ ಸಂರಕ್ಷಣೆಯನ್ನು ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ ನಿಯಮಾನುಸಾರ ಕ್ರಮವಹಿಸಲಾಗುವುದು.

ಸಂಖ್ಯೆ: **TOR/258 /TDV/2023**

(ಎಚ್.ಕೆ.ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು